ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಮೈಸೂರಿನ ನಜರ್ ಬಾದ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ದುಸ್ಥಿತಿ ಬಗ್ಗೆ

ಶ್ರೀ ಎಸ್.ನಾಗರಾಜ್(ಸಂದೇಶ್‌ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

144 (115) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ನಗರದ ನಜರ್ ಬಾದ್‌ನ ಮಸೀದಿ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಶಾಲೆಯ ಕಂಪೌಂಡ್ ನಿರ್ಮಾಣ ಮಾಡಲು ಹಾಗೂ ಕುಸಿದುಬಿದ್ದಿರುವ ಹಳೆಯ ಶಾಲಾ ಕಟ್ಟಡವನ್ನು ಸ್ವಚ್ಛಗೊಳಿಸಿ ವಿದ್ಯಾರ್ಥಿಗಳಿಗೆ ಆಟದ ಮೈದಾನ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೆಯೇ;

(ಇ) ಶಾಲೆಯ ಸುತ್ತಲೂ ಸಾರ್ವಜನಿಕರು ಮಲಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಅನಾರೋಗ್ಯಕರ ಕಲುಷಿತ ವಾತಾವರಣ ನಿರ್ಮಾಣವಾಗಿದ್ದು, ಇದನ್ನು ಸ್ವಚ್ಛಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಈ) ಪ್ರಸ್ತುತ ಈ ಶಾಲೆಯಲ್ಲಿ 1 ರಿಂದ 7ನೇ ತರಗತಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇದನ್ನು ಒಂದು ಮಾದರಿ ಶಾಲೆಯನ್ನಾಗಿ ಅಭಿವೃದ್ಧಿಗೊಳಿಸಿ, ಹೆಚ್ಚು ಸಂಖ್ಯೆಯ ವಿದ್ಯಾರ್ಥಿಗಳು ಈ ಶಾಲೆಗೆ ಸೇರ್ಪಡೆಯಾಗಿ ವಿದ್ಯಾಭ್ಯಾಸ ಮಾಡುವಂತೆ ಕ್ರಮ ಜರುಗಿಸಲಾಗುವುದೇ?